# ನಂಬಿಯಾರ್‌ಗೆ ಪದ್ಮ ಪ್ರಶಸ್ತಿ ನೀಡಲು ರಾಜೀವ್ ಚಂದ್ರಶೇಖರ್ ಆಗ್ರಹ

ನವದೆಹಲಿ, ಅ 3–ಭಾರತೀಯ ಬಾಹ್ಯಾಕಾಶ ಸಂಸ್ಥೆಯ ಮಾಜಿ ವಿಜ್ಞಾನಿ ನಂಬಿ ನಾರಾಯಣನ್ ಅವರಿಗೆ ಪದ್ಮ ಪ್ರಶಸ್ತಿ ನೀಡಬೇಕೆಂದು ಬಿಜೆಪಿ ಸಂಸದ ರಾಜೀವ್ ಚಂದ್ರಶೇಖರ್ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಸಂಬಂಧ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿರುವ ಅವರು, ನಂಬಿಯಾರ್ ಅವರಿಗೆ ಪದ್ಮ ಪ್ರಶಸ್ತಿ ನೀಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ಈ ಮೂಲಕ ಅವರಿಗೆ ನ್ಯಾಯ ಒದಗಿಸಿದಂತಾಗುತ್ತದೆ ಎಂದು ಮನವಿ ಮಾಡಿದ್ದಾರೆ.

ಗೂಢಚಾರಿಕೆ ಪ್ರಕರಣದಲ್ಲಿ ನಂಬಿಯಾರ್ ಅವರನ್ನು ಬಂಧಿಸುವ ಮೂಲಕ ಇಡೀ ಇಸ್ರೋ ಸಂಸ್ಥೆಯನ್ನು ಭಯೋತ್ಪಾದಕರಂತೆ ಕಂಡಿತು ಎಂದು ಅವರು ಆರೋಪಿಸಿದರು. ಸುಪ್ರೀಂಕೋರ್ಟ್ ಹೇಳಿರುವಂತೆ ಸುಳ್ಳು ಆರೋಪದಲ್ಲಿ ನಂಬಿಯಾರ್‌ರನ್ನು ಬಂಧಿಸಿ ಓರ್ವ ಪ್ರತಿಭಾವಂತ ವಿಜ್ಞಾನಿಗೆ ಅವಮಾನ ಮಾಡಲಾಗಿದೆ. ಕೆಲ ಪೊಲೀಸ್ ಅಧಿಕಾರಿಗಳು ಅವರಿಗೆ ಅತ್ಯಂತ ಕೀಳುಮಟ್ಟದಲ್ಲಿ ಚಿತ್ರಹಿಂಸೆ ನೀಡಿದ್ದಾರೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.



1994ರಲ್ಲಿ ನೆರೆಯ ಪಾಕಿಸ್ತಾನಕ್ಕೆ ಭಾರತೀಯ ಬಾಹ್ಯಾಕಾಶ ಕುರಿತ ತಂತ್ರಜ್ಞಾನದ ರಹಸ್ಯಗಳನ್ನು ಮಾರಾಟ ಮಾಡಿದ್ದಾರೆಂಬ ಆರೋಪದ ಮೇಲೆ ನಾರಾಯಣನ್ ಅವರನ್ನು ಪೊಲೀಸರು ಬಂಧಿಸಿದ್ದರು. ಕಾನೂನು ಹೋರಾಟದಲ್ಲಿ ಗೂಢಚಾರಿಕೆ ಆರೋಪದಿಂದ ಸೆ.14ರಂದು ನಂಬಿಯಾರ್‌ರನ್ನು ಸುಪ್ರೀಂಕೋರ್ಟ್ ಬಿಡುಗಡೆಗೊಳಿಸಿ 50 ಲಕ್ಷ ರೂ ಪರಿಹಾರ ನೀಡುವಂತೆ ಕೇರಳ ಸರ್ಕಾರಕ್ಕೆ ಸೂಚಿಸಿತ್ತು.